# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:11ನೇ ಆಗಸ್ಟ್, 2025**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆಗಳು

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 03. ಶೂನ್ಯವೇಳೆ ಪ್ರಸ್ತಾವಗಳು

### 04. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 05. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

..2..

## 06. ಗಮನ ಸೆಳೆಯುವ ಸೂಚನೆಗಳು

01. **ಡಾ:ತಳವಾರ್ ಸಾಬಣ್ಣ** ಅವರು ಕಲಬುರಗಿ ಜಿಲ್ಲೆಯಲ್ಲಿನ ಜಮೀನುಗಳನ್ನು ಖರೀದಿಸಿ ಅತ್ಯಮೂಲ್ಯವಾದ ಸುಣ್ಣದ ಕಲ್ಲಿನ ನೈಸರ್ಗಿಕ ಸಂಪನ್ಮೂಲ ಬಳಸಿಕೊಂಡು ಸಿಮೆಂಟ್ ಉತ್ಪಾದನೆ ಮಾಡುತ್ತಿರುವ ಕಾರ್ಖಾನೆಗಳಿಂದ ಜನ ಜಾನುವಾರು ಮತ್ತು ಬೆಳೆಗಳ ಮೇಲೆ ದುಷ್ಪರಿಣಾಮಗಳು ಉಂಟಾಗುತ್ತಿರುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

02. **ಶ್ರೀ ಮಂಜುನಾಥ್ ಭಂಡಾರಿ** ಅವರು ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ ಶೀಘ್ರವಾಗಿ ಚುನಾವಣೆ ನಡೆಸುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

03. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಅರಣ್ಯ ವಿಭಾಗದಲ್ಲಿ ಆನೆಗಳ ಸಂಘರ್ಷವನ್ನು ತಡೆಯಲು 'ಎಲಿಫೆಂಟ್ ಟಾಸ್ಕ ಫೋರ್ಸ್' ಅನ್ನು ರಚಿಸಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಮತ್ತು ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

04 **ಶ್ರೀಮತಿ ಹೇಮಲತಾ ನಾಯಕ್** ಅವರು ರಾಜ್ಯದಲ್ಲಿ ತೀವ್ರ ಸಂಕಷ್ಟದಲ್ಲಿರುವ ಅಸ್ಪೃಶ್ಯ ಮಾದಿಗ ದಾಸರಿ ಸಮುದಾಯದ ಹೆಸರನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಸೇರಿಸಿ, ಸದರಿ ಸಮುದಾಯಕ್ಕೆ ಸಾಮಾಜಿಕ ನ್ಯಾಯ ದೊರಕಿಸುವ ದೃಷ್ಟಿಯಿಂದ ಕೇಂದ್ರ ಸರ್ಕಾರಕ್ಕೆ ಶೀಘ್ರವಾಗಿ ಶಿಫಾರಸ್ಸು ಪ್ರಸ್ತಾವನೆಯನ್ನು ಸಲ್ಲಿಸುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

05 **ಡಾ: ಎಂ.ಜಿ.ಮುಳೆ** ಅವರು ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿಗೆ ಅನುದಾನದ ಕೊರತೆಯಿಂದಾಗಿ ಬಸವ ಕಲ್ಯಾಣದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಪುಟ್ಟಣ, ರಾಮೋಜಿಗೌಡ ಹಾಗೂ ಡಿ.ಟಿ. ಶ್ರೀನಿವಾಸ್**(ಡಿ.ಟಿ.ಎಸ್) ಅವರುಗಳು ಕರ್ನಾಟಕದಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ವೃದ್ಧಿಸುವ ಸಂಬಂಧ ಸರ್ಕಾರದಿಂದ ಶೈಕ್ಷಣಿಕ ಕಾನೂನುಗಳಿಗೆ ತಿದ್ದುಪಡಿ ತಂದು ಕಾರ್ಯ ಯೋಜನೆಗಳನ್ನು ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು.

02 **ಶ್ರೀ ಸಿ.ಎನ್. ಮಂಜೇಗೌಡ** ಅವರು ರಾಜ್ಯಾದ್ಯಂತ ನಿರ್ಮಾಣಗೊಳ್ಳುತ್ತಿರುವ ಅಕ್ರಮ ಬಡಾವಣೆಗಳನ್ನು . ತಡೆಗಟ್ಟಲು ಕಾನೂನು ರೀತ್ಯಾ ಕ್ರಮ ಕೈಗೊಳ್ಳದಿರುವ ಕುರಿತು ಪ್ರಸ್ತಾಪಿಸುವುದು.

೦೩. **ಶ್ರೀ ಪ್ರತಾಪಸಿಂಹ ನಾಯಕ್ ಕೆ.** ಅವರು ರಾಜ್ಯದಲ್ಲಿ ಅಡಿಕೆ ತೋಟಗಳಲ್ಲಿ ಕಾಣಿಸಿಕೊಂಡಿರುವ ಕೊಳೆ ರೋಗದಿಂದಾಗಿ ಅಡಿಕೆ ಬೆಳೆಗಾರರು ಸಂಕಷ್ಟಕ್ಕೀಡಾಗಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**